ಸಂಪುಟ: 06 ಸಂಚಿಕೆ: 174 ಪುಟಗಳು: 08 ಶನಿವಾರ 05 ಸೆಪ್ಟೆಂಬರ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸೋಲೆಂಬ ರೋಗಕ್ಕೆ ಕಠಿಣ ಪರಿಶ್ರಮ ಮತ್ತು ಆತ್ಮವಿಶ್ವಾಸವೇ ಮದ್ದು. ಇದು ಯಾರಲ್ಲಿ ಇರುತ್ತದೆಯೋ ಅವರಿಗೆ ಯಶಸ್ಸು ಕಟ್ಟಿಟ್ಟ ಬುತ್ತಿ. ಸೂರ್ಯನಂತೆ ಪ್ರಜ್ವಲಿಸಬೇಕಾದರೆ, ಅದರಂತೆ ದಹಿಸಬೇಕು.

## ಬೆಂಗಳೂರಿನ ಪ್ರಮುಖ ಫ್ಲೈಓವರ್‌ಗಳ ಮೇಲೆ ಇಂದಿನಿಂದ ದ್ವಿಚಕ್ರ ವಾಹನ ನಿಷೇಧ

• ಉದಯವಾಹಿನಿ, ಬೆಂಗಳೂರು

ಭೀಕರ ರಸ್ತೆ ಅಪಘಾತಗಳು ಮತ್ತು ಸಂಚಾರ ದಟ್ಟಣೆಯ ನಿಯಂತ್ರಣದ ದೃಷ್ಟಿಯಿಂದ ನಗರದ ಪ್ರಮುಖ ಐದು ಫ್ಲೈ ಓವರ್‌ಗಳಲ್ಲಿ ದ್ವಿಚಕ್ರ ವಾಹನ, ಆಟೋರಿಕ್ಷಾ ಹಾಗೂ ಸರಕು ಸಾಗಣೆ ವಾಹನಗಳ ಸಂಚಾರ ನಿಷೇಧ ಆದೇಶ ಇಂದಿನಿಂದ ಜಾರಿಯಾಗಿದೆ. ಫ್ಲೈಓವರ್‌ಗಳ ಮೇಲೆ ಸಂಭವಿಸುತ್ತಿರುವ ಭೀಕರ ಅಪಘಾತಗಳಿಂದ ಸಾವು – ನೋವುಗಳು ಹೆಚ್ಚುತ್ತಿರುವ ಬೆನ್ನಲ್ಲೇ ಬೆಂಗಳೂರು ಸಂಚಾರ ಪೊಲೀಸರು ಈ ಕಠಿಣ ಕ್ರಮ ಜಾರಿಗೊಳಿಸಿದ್ದಾರೆ. ಮೈಸೂರು ರಸ್ತೆಯ ಬಿಜಿಎಸ್ ಫ್ಲೈಓವರ್ ಮೇಲೆ ಭಾರಿ ಸರಕು ಸಾಗಣೆ ವಾಹನಗಳಿಗೆ ದಿನದ 24 ಗಂಟೆಯೂ ನಿಷೇಧ ಹೇರಲಾಗಿದ್ದು, ಇತರ ಸರಕು ಸಾಗಣೆ ವಾಹನಗಳಿಗೆ ಬೆಳಗ್ಗೆ 7ರಿಂದ 11 ಮತ್ತು ಸಂಜೆ 4 ರಿಂದ ರಾತ್ರಿ 10 ಗಂಟೆಯವರೆಗೆ ಸಂಚಾರ ನಿರ್ಬಂಧ ವಿಧಿಸಲಾಗಿದೆ. ಪೀಣ್ಯ ಎಲಿವೇಟೆಡ್ ಕಾರಿಡಾರ್‌ನಲ್ಲಿ ಆಟೋ ರಿಕ್ಷಾಗಳು ಮತ್ತು ತ್ರಿಚಕ್ರದ ಗೂಡ್ಸ್ ಆಟೋಗಳಿಗೆ 24 ಗಂಟೆಯೂ ನಿಷೇಧಿಸಲಾಗಿದ್ದು, ಭಾರಿ ಹಾಗೂ ಮಧ್ಯಮ ಸರಕು ವಾಹನಗಳಿಗೆ ಬೆಳಗ್ಗೆ 7ರಿಂದ 11 ಮತ್ತು ಸಂಜೆ 4 ರಿಂದ ರಾತ್ರಿ 10ರ ವರೆಗೆ ಸಂಚಾರ ನಿರ್ಬಂಧಿಸಲಾಗಿದೆ. ಸಿಲ್ಕ್ ಬೋರ್ಡ್‌ನಿಂದ ರಾಗಿಗುಡ್ಡದವರೆಗಿನ ಡಬಲ್ ಡೆಕ್ಕರ್ ಫ್ಲೈಓವರ್‌ನಲ್ಲಿ ಭಾರಿ ಸರಕು ಸಾಗಣೆ ವಾಹನಗಳ ಸಂಚಾರವನ್ನ ದಿನದ 24 ಗಂಟೆಯೂ ನಿಷೇಧಿಸಲಾಗಿದೆ. ಸಂಜೀವ ನಗರ ಕ್ರಾಸ್‌ನಿಂದ ವಿದ್ಯಾಶಿಲ್ಪ ಜಂಕ್ಷನ್‌ವರೆಗಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆಯ ಎಲಿವೇಟೆಡ್ ಕಾರಿಡಾರ್‌ನಲ್ಲಿ ದ್ವಿಚಕ್ರ ವಾಹನಗಳು ಮತ್ತು ಆಟೋರಿಕ್ಷಾಗಳಿಗೆ ದಿನದ 24 ಗಂಟೆಯೂ ಪ್ರವೇಶ ನಿರ್ಬಂಧ ವಿಧಿಸಲಾಗಿದೆ.

## ದಸರಾಗೆ ದಕ್ಷಿಣ ಭಾರತದ ಎಲ್ಲಾ ಮುಖ್ಯಮಂತ್ರಿಗಳನ್ನು ಆಹ್ವಾನಿಸಲು ತೀರ್ಮಾನ

• ಉದಯವಾಹಿನಿ, ಬೆಂಗಳೂರು

ಈ ಬಾರಿಯ ಮೈಸೂರು ದಸರಾಗೆ ದಕ್ಷಿಣ ಭಾರತದ ಎಲ್ಲಾಮುಖ್ಯಮಂತ್ರಿಗಳನ್ನು ಆಹ್ವಾನಿಸಲು ತೀರ್ಮಾನಿಸಲಾಗಿದೆ. ಜೊತೆಗೆ ವಿವಿಧ ದೇಶಗಳ ರಾಯಭಾರಿಗಳು, ಅಧಿಕಾರಿಗಳನ್ನು ಆಹ್ವಾನಿಸಲು ಸೂಚನೆ ನೀಡಲಾಯಿತು. ಈ ಸಂಬಂಧ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ 2026ರ ಮೈಸೂರು ದಸರಾ ಆಚರಣೆ ಕುರಿತ ಪ್ರಗತಿ ಪರಿಶೀಲನಾ ಸಭೆ ರೇಸ್ ಕೋರ್ಸ್ ರಸ್ತೆಯ ಶಕ್ತಿಭವನದಲ್ಲಿ ನಡೆಯಿತು. ರಾಜ್ಯಗಳ ಕಲಾ ತಂಡಗಳ ಪ್ರದರ್ಶನ ನೀಡಲು ಆಹ್ವಾನಕ್ಕೆ ನಿರ್ಧರಿಸಲಾಗಿದ್ದು, ಏರ್ ಶೋ ನಡೆಸುವ ಬಗ್ಗೆ ಕೇಂದ್ರ ರಕ್ಷಣಾ ಸಚಿವರ ಜೊತೆ ಸಿಎಂ ಚರ್ಚಿಸಿದರು. ಏರ್ ಶೋ, ಭೂ ಸೇನೆ, ವಾಯುಸೇನೆ ಹಾಗೂ ನೌಕಾಪಡೆಗಳಿಂದ ಟ್ಯಾಬ್ಲೋದಲ್ಲಿ ಹಾಗೂ ಕವಾಯತಿನಲ್ಲಿ ಭಾಗವಹಿಸಲು ತಂಡಗಳನ್ನು ಕಳುಹಿಸುವಂತೆ ಅವರು ಮನವಿ ಮಾಡಿದರು. ದಸರಾದಲ್ಲಿ ಟಿಕೆಟ್ ಪಡೆದವರಿಗೆ ಸೂಕ್ತ ಆಸನ ವ್ಯವಸ್ಥೆಗೆ ಆದ್ಯತೆ ನೀಡಲು ಸಿಎಂ ಸೂಚನೆ ನೀಡಿದರು. ಚಿತ್ರಸಂತೆ, ಫ್ಲೀ ಮಾರ್ಕೆಟ್, ವಿಂಟೇಜ್ ರಂಗೋಲಿ ಸ್ಪರ್ಧೆ ವಿನೂತನ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಜಿಲ್ಲಾ ಉಸ್ತುವಾರಿ ಸಚಿವರ ಜೊತೆಗೆ, ಕಾರ್ಯಕ್ರಮಗಳ ಮೇಲ್ವಿಚಾರಣೆಗೆ ಪ್ರತಿ ದಿನ ಒಬ್ಬ ಸಚಿವರನ್ನು ನಿಯೋಜಿಸಲು ಸಿಎಂ ಡಿಕೆಶಿ ನಿರ್ದೇಶಿಸಿದರು.

ರಾಜ್ಯದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳು, ಚಲನಚಿತ್ರ ವಾಣಿಜ್ಯ ಮಂಡಳಿ, ಇಸ್ರೋ, ಡಿಆರ್‌ಡಿಓ ಸೇರಿದಂತೆ ಕೇಂದ್ರ ಸರ್ಕಾರದ ವಿವಿಧ ಸಂಸ್ಥೆಗಳಿಗೆ ಆಹ್ವಾನ ನೀಡಲು ತೀರ್ಮಾನಿಸಲಾಗಿದೆ. ರಾಜ್ಯದ ಭಾಗಗಳನ್ನು ಪ್ರತಿನಿಧಿಸುವ ಕಲಾ ತಂಡಗಳಿಗೆ ಅವಕಾಶ ನೀಡಬೇಕು. ಮೈಸೂರಿನ ಅರಮನೆ ಮತ್ತಿತರ ಪ್ರಮುಖ ತಾಣಗಳ ಕುರಿತು ಕಿರುಚಿತ್ರ ನಿರ್ಮಿಸಿ, ವ್ಯಾಪಕ ಪ್ರಚಾರ ನೀಡಲು ಸಿಎಂ ಸೂಚಿಸಿದರು.

## ಬಿಎಂಟಿಸಿ ಬಸ್ ಮೇಲೆ ಬಿದ್ದ ಬೃಹತ್ ಮರ ಪ್ರಯಾಣಿಕರು ಪಾರು



• ಉದಯವಾಹಿನಿ, ಬೆಂಗಳೂರು

ಬಿಎಂಟಿಸಿ ಎಲೆಕ್ಟ್ರಿಕ್ ಬಸ್ ಮೇಲೆ ಬೃಹತ್ ಮರ ಬಿದ್ದ ಘಟನೆ ಯಲಹಂಕ ನ್ಯೂ ಟೌನ್ ಬಳಿ ನಡೆದಿದೆ. ಸೆ.9ರ ಸಂಜೆ 4ರ ಸುಮಾರಿಗೆ ಮರ ಉರುಳಿ ಬಸ್ ಮೇಲೆ ಬಿದ್ದಿದೆ. ಬಿಎಂಟಿಸಿ ಎಲೆಕ್ಟ್ರಿಕ್ ಬಸ್‌ನಲ್ಲಿ 25ಕ್ಕೂ ಹೆಚ್ಚು ಪ್ರಯಾಣಿಕರು ಸಂಚಾರ ಮಾಡುತ್ತಿದ್ದರು. ಬಸ್‌ನಲ್ಲಿದ್ದ ಎಲ್ಲಾ ಪ್ರಯಾಣಿಕರು ಸುರಕ್ಷಿತರಾಗಿದ್ದಾರೆ. ರಸ್ತೆ ಪಕ್ಕದಲ್ಲಿ ಕಟ್ಟಡ ಕಾಮಗಾರಿ ನಡೆಯುತ್ತಿತ್ತು. ಮರದ ಪಕ್ಕದಲ್ಲೇ ಕಾಮಗಾರಿಗೆ ಮಣ್ಣು ಅಗೆಯಲಾಗಿತ್ತು. ಇದರಿಂದ ಮರದ ಬುಡ ಸಡಿಲಗೊಂಡು ಮರ ಬಿದ್ದಿದೆ. ಮರ ಬಿದ್ದ ಪರಿಣಾಮ ಯಲಹಂಕ ನ್ಯೂ ಟೌನ್ ಬಳಿ ಭಾರೀ ಟ್ರಾಫಿಕ್ ಜಾಮ್ ಉಂಟಾಗಿದೆ.

## ಮತದಾರರಿಗೆ ನೋಟಿಸ್ ವಿತರಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ನೋಟಿಸ್ ವಿತರಣೆಯನ್ನು ಆರಂಭಿಸಿದೆ. ಅನ್ ಮ್ಯಾಪಿಂಗ್ ಮತ್ತು ಗೊಂದಲಮಯ ಆಗಿರುವವರಿಗೆ ನೋಟಿಸ್ ನೀಡಲು ಚುನಾವಣಾ ಆಯೋಗ ಮುಂದಾಗಿದೆ. ಇದುವರೆಗೂ 7.31 ಲಕ್ಷ ಮತದಾರರಿಗೆ ನೋಟಿಸ್ ವಿತರಿಸಲಾಗಿದೆ. ಒಟ್ಟು 43,81,143 ಮತದಾರರಿಗೆ ನೋಟಿಸ್ ನೀಡುವ ಗುರಿ ಹೊಂದಲಾಗಿದೆ. ,31,770 ಮತದಾರರಿಗೆ ಸದ್ಯಕ್ಕೆ ನೋಟಿಸ್ ನೀಡಲಾಗಿದೆ. ಇನ್ನೂ 36,49,373 ಮತದಾರರಿಗೆ ನೋಟಿಸ್ ವಿತರಿಸುವುದು ಬಾಕಿ ಇದೆ. ನೋಟಿಸ್ ನೀಡಿದ 206 ಮಂದಿಯನ್ನ ಮಾತ್ರ ವಿಚಾರಣೆ ಮಾಡಲಾಗಿದೆ. ಸೆಪ್ಟೆಂಬರ್ 24 ರ ಒಳಗೆ ನೋಟಿಸ್ ಪಡೆದು ಚುನಾವಣಾ ಆಯೋಗಕ್ಕೆ ದಾಖಲೆ ಸಮೇತ ರಿಪ್ಲೈ ನೀಡಬೇಕಿದೆ. ಮತದಾರರ ಪಟ್ಟಿಗೆ ಹೊಸದಾಗಿ ಸೇರ್ಪಡೆ, ತಿದ್ದುಪಡಿ, ಬದಲಾವಣೆಗೆ ಸಾರ್ವಜನಿಕರಿಂದ ಅರ್ಜಿ ಸಲ್ಲಿಕೆಯಾಗಿತ್ತು. 9,45,968 ಮಂದಿ ಫಾರಂ6, ಫಾರಂ6ಎ, ಫಾರಂ7, ಫಾರಂ8ಕ್ಕೆ ಅರ್ಜಿ ಸಲ್ಲಿಕೆ ಮಾಡಿದ್ದಾರೆ.



ಈ ಐತಿಹಾಸಿಕ ಯಶಸ್ಸಿಗೆ ಇಸ್ರೋ ವಿಜ್ಞಾನಿಗಳನ್ನು ಅಭಿನಂದಿಸಿರುವ ಪ್ರಧಾನಿ ನರೇಂದ್ರ ಮೋದಿ, ಇದು ಭಾರತದ ಬಾಹ್ಯಾಕಾಶ ಕ್ಷೇತ್ರದ ಬೆಳೆಯುತ್ತಿರುವ ಸಾಮರ್ಥ್ಯ ಮತ್ತು ನಾವೀನ್ಯತೆಗೆ ಸಾಕ್ಷಿಯಾಗಿದೆ.

# ಭಾರತದ ಗುರಿ ಇಸ್ರೋ ಮುಡಿಗೆ ಮತ್ತೊಂದು ಗರಿ




## ಭಾರತದ ಮೇಲೆ ನಿರಂತರ ಹದ್ದಿನ ಕಣ್ಣು

ಈ ಉಪಗ್ರಹವು ಸಾಮಾನ್ಯ ದಿನಗಳಲ್ಲಿ ಪ್ರತಿ 30 ನಿಮಿಷಕ್ಕೊಮ್ಮೆ ಹಾಗೂ ಪ್ರವಾಹ ಅಥವಾ ಚಂಡಮಾರುತದಂತಹ ತುರ್ತು ಸಂದರ್ಭಗಳಲ್ಲಿ ಪ್ರತಿ 5 ನಿಮಿಷಕ್ಕೊಮ್ಮೆ ನೈಜ-ಸಮಯದ ಸ್ಪಷ್ಟ ಚಿತ್ರಗಳನ್ನು ರವಾನಿಸುವ ಅಪರೂಪದ ತಂತ್ರಜ್ಞಾನವನ್ನು ಹೊಂದಿದೆ. ವಿಸಿಬಲ್, ಇನ್‌ಫ್ರಾರೆಡ್, ಮಲ್ಟಿಸ್ಪೆಕ್ಟ್ರಲ್ ಹಾಗೂ ಹೈಪರ್‌ಸ್ಪೆಕ್ಟ್ರಲ್ ಬ್ಯಾಂಡ್‌ಗಳಲ್ಲಿ ಕಾರ್ಯನಿರ್ವಹಿಸುವ ಸೆನ್ಸರ್‌ಗಳನ್ನು ಇದು ಹೊಂದಿದ್ದು, ಮೋಡ ಕವಿದ ವಾತಾವರಣದಲ್ಲೂ ಸ್ಪಷ್ಟ ಚಿತ್ರ ನೀಡುತ್ತದೆ. 2021 ರಲ್ಲಿ ಇದೇ ಮಾದರಿಯ 'ಇಒಎಸ್-03' ಉಪಗ್ರಹ ಹೊತ್ತೊಯ್ದಿದ್ದ ಜಿಎಸ್‌ಎಲ್‌ವಿ-ಎಫ್10 ರಾಕೆಟ್ ಕ್ರಯೋಜೆನಿಕ್ ಹಂತದಲ್ಲಿ ವಿಫಲವಾಗಿತ್ತು. ಇಂದಿನ ಯಶಸ್ಸು ಇಸ್ರೋದ ಸ್ವದೇಶಿ ಕ್ರಯೋಜೆನಿಕ್ ಇಂಜಿನ್ ಸಾಮರ್ಥ್ಯ ಮತ್ತು ತಾಂತ್ರಿಕ ವಿಶ್ವಾಸಾರ್ಹತೆಯನ್ನು ಮರುಸ್ಥಾಪಿಸಿದೆ.

## ಹವಾಮಾನ ಮುನ್ಸೂಚನೆ

1 ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ನಿಲ್ದಾಣದಿಂದ ರಾಕೆಟ್ ಯಶಸ್ವಿ ಉಡಾವಣೆ

2 ಭಾರತದ ಮೊಟ್ಟಮೊದಲ ಇಮೇಜಿಂಗ್ ಸ್ಯಾಟಲೈಟ್ ಅನ್ನು ಸಬ್-ಕಕ್ಷೆಗೆ ಯಶಸ್ವಿಯಾಗಿ ತಲುಪಿಸಿದ ಇಸ್ರೋ

3 ಏನಿದು ಇಮೇಜಿಂಗ್ ಸ್ಯಾಟಲೈಟ್

ಸೈಕ್ಲೋನ್ (ಚಂಡಮಾರುತ), ಪ್ರವಾಹ, ಮೋಡಸ್ಫೋಟ ಹಾಗೂ ಕಾಡ್ಗಿಚ್ಚಿನಂತಹ ಘಟನೆಗಳನ್ನು ಕ್ಷಣಕ್ಷಣಕ್ಕೂ ಮೇಲ್ವಿಚಾರಣೆ ಮಾಡಲು ಈ ಉಪಗ್ರಹ ನೆರವಾಗಲಿದೆ. ಕೃಷಿ, ಅರಣ್ಯ ಇಲಾಖೆ ಹಾಗೂ ಸಾಗರ ಸಂಪನ್ಮೂಲಗಳ ನಿರ್ವಹಣೆಗೆ ಇದು ಮಹತ್ವದ ದತ್ತಾಂಶ ನೀಡಲಿದೆ. 3. ಗಡಿ ಭದ್ರತೆ ಮತ್ತು ರಕ್ಷಣೆ, ಬಾಹ್ಯಾಕಾಶದಿಂದ ದೇಶದ ಗಡಿಭಾಗಗಳು ಹಾಗೂ ಕರಾವಳಿ ತೀರಗಳ ಮೇಲೆ ನಿರಂತರ ನಿಗಾ ಇಡಲು ಹಾಗೂ ವ್ಯೂಹಾತ್ಮಕ ಭದ್ರತಾ ದತ್ತಾಂಶ ಪಡೆಯಲು ಇದು ದೇಶಕ್ಕೆ 'ಆಕಾಶದ ಕಣ್ಣು' ರೀತಿ ಕೆಲಸ ಮಾಡಲಿದೆ. 'ಜಿಎಸ್‌ಎಲ್‌ವಿ-ಎಫ್17 ಮೂಲಕ ಇಒಎಸ್ 05 ಉಪಗ್ರಹವನ್ನು ನಿಖರವಾದ ಕಕ್ಷೆಗೆ ತಲುಪಿಸಲಾಗಿದೆ. ಉಪಗ್ರಹದ ಸೋಲಾರ್ ಪ್ಯಾನಲ್‌ಗಳು ತೆರೆದುಕೊಂಡಿದ್ದು, ಅದರ ಸ್ಥಿತಿ ಉತ್ತಮವಾಗಿದೆ.

## ಸಚಿವ ಜಿತೇಂದ್ರ ಸಿಂಗ್ ಶ್ಲಾಘನೆ

ಈ ಐತಿಹಾಸಿಕ ಸಾಧನೆಗೆ ಬಾಹ್ಯಾಕಾಶ ಇಲಾಖೆಯ ಕೇಂದ್ರ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಅವರು ಇಸ್ರೋ ವಿಜ್ಞಾನಿಗಳನ್ನು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ. ಕೇಂದ್ರ ಸಚಿವ ಜಿತೇಂದ್ರಸಿಂಗ್ ಅಭಿನಂದಿಸಿದ್ದು ಯಶಸ್ಸಿನ ಕುರಿತು ಎಕ್ಸ್ ಜಾಲತಾಣದಲ್ಲಿ ಹಂಚಿಕೊಂಡಿರುವ ಸಚಿವರು, ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತದ ಮತ್ತೊಂದು ಉಪಗ್ರಹವನ್ನು ಯಶಸ್ವಿಯಾಗಿ ಉಡಾವಣೆ ಮಾಡಿದ ಇಸ್ರೋ ತಂಡಕ್ಕೆ ಅಭಿನಂದನೆಗಳು ಎಂದು ತಿಳಿಸಿದ್ದಾರೆ. ಹಲವು ಸವಾಲುಗಳ ನಡುವೆ ಈ ಬಾರಿಯ ಮಿಷನ್ ಅತ್ಯಂತ ನಿರ್ಣಾಯಕವಾಗಿತ್ತು.

ಉಡಾವಣೆಗೂ ಮುನ್ನ ಇಸ್ರೋ ಅಧ್ಯಕ್ಷ ವಿ. ನಾರಾಯಣನ್ ಅವರು ತಿರುಪತಿಯ ತಿರುಮಲ ಶ್ರೀ ವೆಂಕಟೇಶ್ವರ ಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿ ಮಿಷನ್ ಯಶಸ್ಸಿಗಾಗಿ ಪ್ರಾರ್ಥನೆ ಸಲ್ಲಿಸಿದ್ದರು. ಅವರ ಪ್ರಾರ್ಥನೆ ಮತ್ತು ವಿಜ್ಞಾನಿಗಳ ಶ್ರಮಕ್ಕೆ ಈಗ ದೊಡ್ಡ ಮಟ್ಟದ ಯಶಸ್ಸು ಸಿಕ್ಕಂತಾಗಿದೆ.



## ಕಾರ್ಯಚಟುವಟಿಕೆ ಭರದಿಂದ ಸಾಗಿದೆ



ಮಾನವರಹಿತ ಮೊದಲ ಗಗನಯಾನ ಮಿಷನ್‌ನ ಕಾರ್ಯಚಟುವಟಿಕೆಗಳು ಅತ್ಯಂತ ವ್ಯವಸ್ಥಿತವಾಗಿ ಹಾಗೂ ಭರದಿಂದ ಸಾಗುತ್ತಿದ್ದು, ಪ್ರಸ್ತುತ ಕ್ಯಾಲೆಂಡರ್ ವರ್ಷದಲ್ಲೇ ಉಡಾವಣೆ ನಡೆಸಲು ಸಂಸ್ಥೆ ಸರ್ವಸನ್ನದ್ಧವಾಗಿದೆ ಎಂದು ಇಸ್ರೊ ಅಧ್ಯಕ್ಷ ವಿ. ನಾರಾಯಣನ್ ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು, ''ಮುಂಬರುವ ದಿನಗಳಲ್ಲಿ ಗಗನಯಾನ ನೌಕೆಯ ಸುರಕ್ಷತೆ ಮತ್ತು ತಾಂತ್ರಿಕ ಪರೀಕ್ಷೆಗಳನ್ನು ಪೂರ್ಣಗೊಳಿಸಲಾಗುವುದು. ಪ್ರಸಕ್ತ ಹಣಕಾಸು ವರ್ಷದಲ್ಲಿ ಒಟ್ಟು ಆರು ಪ್ರಮುಖ ಉಡಾವಣೆಗಳನ್ನು ಕೈಗೊಳ್ಳುವ ಗುರಿ ಹೊಂದಲಾಗಿದೆ'' ಎಂದು ಸ್ಪಷ್ಟಪಡಿಸಿದ್ದಾರೆ.

## ಗಗನಯಾನ ಸೇರಿ ಮುಂದಿನ ಗುರಿಗಳು

ಶ್ರೀಹರಿಕೋಟಾದಿಂದ ಈ ಆರ್ಥಿಕ ವರ್ಷದಲ್ಲಿ ಇದು ಇಸ್ರೋದ ಮೊದಲ ಉಡಾವಣೆಯಾಗಿದ್ದು, ಪ್ರಸಕ್ತ ಸಾಲಿನಲ್ಲಿ ಮಾನವರಹಿತ 'ಗಗನಯಾನ' ಪರೀಕ್ಷಾರ್ಥ ಯಾನಗಳು ಸೇರಿದಂತೆ ಒಟ್ಟು 6 ಬೃಹತ್ ಉಡಾವಣೆಗಳನ್ನು ಕೈಗೊಳ್ಳುವ ಗುರಿ ಹೊಂದಲಾಗಿದೆ ಎಂದು ಇಸ್ರೋ ತಿಳಿಸಿದೆ. ಚಂಡಮಾರುತ, ದಿಢೀರ್ ಪ್ರವಾಹ, ಕಾಡ್ಗಿಚ್ಚು ಮತ್ತು ಭೂಕುಸಿತಗಳ ಮುನ್ಸೂಚನೆ ಪಡೆಯಲು ಹಾಗೂ ದೇಶದ ಗಡಿ ಭಾಗಗಳಲ್ಲಿ ಶತ್ರುಗಳ ಚಲನವಲನದ ಮೇಲೆ ಹದ್ದಿನ ಕಣ್ಣಿಡಲು ರಕ್ಷಣಾ ಪಡೆಗಳಿಗೆ ಇದು ನಿರ್ಣಾಯಕ ಶಕ್ತಿಯಾಗಲಿದೆ. ಬೆಳೆಗಳ ಆರೋಗ್ಯ, ಜಲಾಶಯಗಳ ನೀರಿನ ಮಟ್ಟ, ಅರಣ್ಯ ವ್ಯಾಪ್ತಿ ಹಾಗೂ ನಗರ ಯೋಜನೆಗಳ ನಿಖರ ನಿರ್ವಹಣೆಗೆ ನೀತಿ ನಿರೂಪಕರಿಗೆ ನೈಜ ದತ್ತಾಂಶವನ್ನು ಒದಗಿಸಲಿದೆ.



## ಈ ಉಪಗ್ರಹದಿಂದ ಸಾಮಾನ್ಯರು ದೇಶಕ್ಕೆ ಸಿಗುವ ಪ್ರಯೋಜನಗಳೇನು

ಉಪಗ್ರಹದಿಂದ ಸಿಗುವ ಚಿತ್ರಗಳು ಮತ್ತು ಮಾಹಿತಿ ನೇರವಾಗಿ ಜನರ ಮೊಬೈಲ್‌ಗೆ ಬರುವುದಿಲ್ಲ. ಸರ್ಕಾರಿ ವ್ಯವಸ್ಥೆಗಳು ಬಳಸುವುದರಿಂದ ಜನರಿಗೆ ಪರೋಕ್ಷವಾಗಿ ಪ್ರಯೋಜನ ಸಿಗಬಹುದು. ಹವಾಮಾನ ಮುನ್ಸೂಚನೆ, ಕೃಷಿ ಮೇಲ್ವಿಚಾರಣೆ, ಪರಿಸರ ಬದಲಾವಣೆ, ಪ್ರಕೃತಿ ವಿಕೋಪ ನಿರ್ವಹಣೆ ದೇಶದ ಯೋಜನೆ ರೂಪಿಸುವ ಕೆಲಸಗಳಲ್ಲಿ ಉಪಗ್ರಹ ಮಾಹಿತಿ ಬಳಸಬಹುದು. ಭಾರತದಲ್ಲಿ ಉಪಗ್ರಹ ತಂತ್ರಜ್ಞಾನವನ್ನು ಕೃಷಿ, ಕೋಪ ನಿರ್ವಹಣೆಯಲ್ಲಿ ಬಳಸಲಾಗುತ್ತಿದೆ. ಹೊಲಗಳ ಮೇಲಿನ ಬದಲಾವಣೆಗಳನ್ನು ಉಪಗ್ರಹ ಚಿತ್ರಗಳ ಮೂಲಕ ಗಮನಿಸಬಹುದು. ಬೆಳೆ ಪ್ರದೇಶ, ಬರ ಪರಿಸ್ಥಿತಿ, ಬೆಳೆ ಬೆಳವಣಿಗೆ ಮತ್ತು ಹಾನಿಯಂತಹ ವಿಷಯಗಳನ್ನು ದೊಡ್ಡ ಪ್ರಮಾಣದಲ್ಲಿ ಅಂದಾಜಿಸಲು ಭೂ ವೀಕ್ಷಣಾ ತಂತ್ರಜ್ಞಾನ ಸಹಾಯ ಮಾಡುತ್ತದೆ. ಬರ ಮೇಲ್ವಿಚಾರಣೆ ಮತ್ತು ಬೆಳೆ ವಿಮೆಯಂತಹ ಕೆಲಸಗಳಲ್ಲೂ ಉಪಗ್ರಹ ಮಾಹಿತಿ ಬಳಸುವ ಸಾಧ್ಯತೆ ಇದೆ. ಸೆ.4ರ ಉಡಾವಣೆ ಕೇವಲ ರಾಕೆಟ್ ಉಡಾವಣೆ ಅಲ್ಲ. ಏಳು ತಿಂಗಳ ವಿರಾಮದ ಬಳಿಕ ಇಸ್ರೋ ಮತ್ತೆ ಉಡಾವಣಾ ಹಾದಿಗೆ ಮರಳುತ್ತಿರುವುದರ ಭಾರತದ ಭೂ ವೀಕ್ಷಣಾ ಸಾಮರ್ಥ್ಯಕ್ಕೆ ಹೊಸ ತಂತ್ರಜ್ಞಾನ ಸೇರ್ಪಡೆಯಾಗುತ್ತಿರುವ ಮಿಷನ್ ಇದಾಗಿದೆ.

• ಉದಯವಾಹಿನಿ, ಬೆಂಗಳೂರು

7 ತಿಂಗಳ ವಿರಾಮದ ಬಳಿಕ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಮತ್ತೊಂದು ಉಪಗ್ರಹ ಉಡಾವಣೆ ಮಾಡಿದ್ದು, ಇದು ಭಾರತಕ್ಕೆ ಪ್ರಮುಖ ಮೈಲಿಗಲ್ಲಾಗಿದೆ. ಹೌದು. ಭಾರತದಲ್ಲಿ ಬಹುತೇಕರು ನಿದ್ರೆಗೆ ಜಾರಿದ್ದ ಸಮಯದಲ್ಲಿ ಇಸ್ರೋ ಈ ಅಭೂತಪೂರ್ವ ಸಾಧನೆ ಮಾಡಿದೆ. ಆಂಧ್ರಪ್ರದೇಶದ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಭೂ ವೀಕ್ಷಣಾ ಉಪಗ್ರಹ EOS-05 ಅನ್ನು ಹೊತ್ತ GSLV-F 17 ರಾಕೆಟ್ ಶುಕ್ರವಾರ ನಸುಕಿನ ಜಾವ 2:55ರ ಸುಮಾರಿಗೆ ಬಾಹ್ಯಾಕಾಶ ನಿಲ್ದಾಣದಿಂದ ಯಶಸ್ವಿಯಾಗಿ ಉಡಾವಣೆಯಾಗಿದೆ. ಈ ಮೂಲಕ ಇಸ್ರೋ ಭಾರತದ ಮೊಟ್ಟಮೊದಲು EOS-05 ಇಮೇಜಿಂಗ್ ಉಪಗ್ರಹವನ್ನ ಯಶಸ್ವಿಯಾಗಿ ಉಡಾಯಿಸಿದ ಸಾಧನೆ ಮಾಡಿದೆ. ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದ 2ನೇ ಉಡಾವಣಾ ಪ್ಯಾಡ್‌ನಿಂದ ರಾಕೆಟ್ ಹಾರಿದ್ದು, ಭೂ ವೀಕ್ಷಣಾ ಸ್ಯಾಟಲೈಟ್ EOS-05 ಅನ್ನು ಸಬ್-ಜಿಯೋಸಿಂಕ್ರೋನಸ್ ವರ್ಗಾವಣೆ ಕಕ್ಷೆಗೆ ಯಶಸ್ವಿಯಾಗಿ ನಿಯೋಜನೆ ಮಾಡುವಲ್ಲಿ ಯಶಸ್ವಿಯಾಗಿದೆ. ಇನ್ನೂ ಈ ರಾಕೆಟ್ ಕಾರ್ಯಾಚರಣೆ ಕುರಿತು ಇಸ್ರೋದ GSLV-F17 ರಾಕೆಟ್ ಕಾರ್ಯಾಚರಣೆ ಮಿಷನ್ ನಿರ್ದೇಶಕ ಥಾಮಸ್ ಕುರಿಯನ್ ಮಾಹಿತಿ ನೀಡಿದ್ದು ಇದು GSLV ನಿಂದ GTO ಅಥವಾ GTO-ಕಕ್ಷೆಗೆ ಉಡಾಯಿಸಲಾದ ಅತ್ಯಂತ ಭಾರವಾದ ಉಪಗ್ರಹವಾಗಿದೆ. ಇದು ನಮಗೆಲ್ಲರಿಗೂ ಬಹಳ ಹೆಮ್ಮೆ ಮತ್ತು ಸಂತೋಷದ ಕ್ಷಣ. ಈ ಬಾರಿEOS-05 ಉಪಗ್ರಹ ಹೊತ್ತು ಉಡಾವಣೆಯಾಗುವ ಮೂಲಕ GSLV ರಾಕೆಟ್ ತನ್ನ 19ನೇ ಕಾರ್ಯಾಚರಣೆ ಯಶಸ್ವಿಯಾಗಿ ಪೂರ್ಣಗೊಳಿಸಿದೆ. EOS-05 ಉಪಗ್ರಹವು ಅನನ್ಯವಾಗಿ ಕಾನ್ಫಿಗರ್ ಮಾಡಲಾದ ಭೂ ವೀಕ್ಷಣಾ ಉಪಗ್ರಹವಾಗಿದ್ದು, ನೈಜ-ಸಮಯದ ಚಿತ್ರಣವನ್ನು ಹೊಂದಿದೆ. ಇದು GSLV ಯಿಂದ GTOಅಥವಾ ಸಬ್-GTO ಕಕ್ಷೆಗೆ ಉಡಾಯಿಸಲ್ಪಟ್ಟ ಅತ್ಯಂತ ಭಾರವಾದ ಉಪಗ್ರಹವಾಗಿದೆ. ಈ ಕೆಲವು ನಿಮಿಷಗಳ ಉಡಾವಣೆಯ ಹಿಂದೆ ತಿಂಗಳುಗಳು ಮತ್ತು ವರ್ಷಗಳ ಕಠಿಣ ಪ್ರಯತ್ನವಿದೆ ಎಂದು ಶ್ಲಾಘಿಸಿದ್ದಾರೆ.

## ದೇಶದ ಮೊಟ್ಟಮೊದಲ ಇಮೇಜಿಂಗ್ ಉಪಗ್ರಹ ಎಂಬ ಹೆಗ್ಗಳಿಕೆ

ಇಒಎಸ್-05 ಸಾಮಾನ್ಯ ಭೂ ವೀಕ್ಷಣಾ ಉಪಗ್ರಹಕ್ಕಿಂತ ವಿಭಿನ್ನವಾಗಿದೆ. ಇದು ಭೂಸ್ಥಿರ ಕಕ್ಷೆಯಿಂದ ದೊಡ್ಡ ಪ್ರದೇಶವನ್ನು ನಿರಂತರವಾಗಿ ಗಮನಿಸುವ ಸಾಮರ್ಥ್ಯ ಹೊಂದಿರಲಿದೆ. ಅಂದರೆ ಒಂದೇ ಪ್ರದೇಶದ ಹವಾಮಾನ ಅಥವಾ ಪರಿಸರ ಬದಲಾವಣೆಗಳನ್ನು ಕಡಿಮೆ ಸಮಯದ ಅಂತರದಲ್ಲಿ ಗಮನಿಸಲು ಸಾಧ್ಯವಾಗಲಿದೆ. ಇದನ್ನು ಮೊದಲು ಜಿಐಸ್ಯಾಟ್-1ಎ ಎಂದು ಕರೆಯಲಾಗುತ್ತಿತ್ತು. 2021ರಲ್ಲಿ ಇದೇ ಸರಣಿಯ ಜಿಐಸ್ಯಾಟ್-1 ಮಿಷನ್ ಕಕ್ಷೆ ಸೇರುವಲ್ಲಿ ವಿಫಲವಾಗಿತ್ತು. ಇದೀಗ ಸುಧಾರಿತ ರೂಪದಲ್ಲಿ ಇಒಎಸ್-05 ಅನ್ನು ಉಡಾವಣೆ ಮಾಡಲಾಗುತ್ತಿದೆ.

ಇಸ್ರೋ ಪ್ರಮುಖ ಉಡಾವಣೆಗಳಿಂದ ಸುಮಾರು 7 ತಿಂಗಳ ವಿರಾಮ ತೆಗೆದುಕೊಂಡಿತ್ತು. ಇದೀಗ ದೇಶದ ಮೊದಲ ಇಮೇಜಿಂಗ್ ಉಪಗ್ರಹವನ್ನ ಇಸ್ರೋ ಉಡಾವಣೆ ಮಾಡಿದ್ದು, ಹೊಸ ಮೈಲಿಗಲ್ಲು ಸಾಧಿಸಿದೆ.

## ಬೆಂಗ್ಳೂರು ಸೇರಿ ನಾಡಿನಾದ್ಯಂತ ಶ್ರೀಕೃಷ್ಣ ಜನ್ಮಾಷ್ಟಮಿಯ ಸಂಭ್ರಮ

• ಉದಯವಾಹಿನಿ, ಬೆಂಗಳೂರು

ನಾಡಿನಲ್ಲೆಡೆ ಬೃಂದಾವನದ ನಂದನ ಶ್ರೀ ಕೃಷ್ಣನ ಜನ್ಮಾಷ್ಟಮಿಯ ಸಂಭ್ರಮ. ಬೆಂಗಳೂರಿನ ವೇಣು ಮಾದವನ ದೇವಾಲಯಗಳಲ್ಲಿ ಶ್ರೀಕೃಷ್ಣಾಷ್ಟಮಿಯ ಸಂಭ್ರಮ ಜೋರಾಗಿಯೇ ರಾಜ್ಯದ ವಿವಿಧ ಶ್ರೀಕೃಷ್ಣನ ಸನ್ನಿಧಿಗಳಲ್ಲಿ ಸಂಭ್ರಮಾಚರಣೆ ನಡೆದಿದೆ.

ಬೆಂಗಳೂರಿನ ಪ್ರಸಿದ್ಧ ಇಸ್ಕಾನ್ ದೇವಾಲಯದಲ್ಲೂ ಶ್ರೀ ಕೃಷ್ಣನ ಜನ್ಮಾಷ್ಟಮಿಯ ಸಂಭ್ರಮ ಮನೆ ಮಾಡಿದೆ. ಹಬ್ಬದ ದಿನ ಬೃಂದಾವನದ ಟೀಮ್‌ನಿಂದ ಮುಖ್ಯ ಮಂದಿರದಲ್ಲಿ ನವಿಲಿನ ಅಲಂಕಾರ ಕಂಗೊಳಿಸಿದೆ. ರಂಗ ಮಂದಿರದಲ್ಲಿ ವಿಶೇಷವಾಗಿ ರಾಧ = ಕೃಷ್ಣ ಉತ್ಸವ ಮೂರ್ತಿಗಳಿಗೆ 4 ಬಾರಿ 108 ಬಗೆಯ ಜಲಾಮೃತದ ಅಭಿಷೇಕವನ್ನ ಕೂಡ ಮಾಡಲಾದೆ.



## ರಾಜ್ಯದ ಜನತೆಗೆ ಮತ್ತೊಂದು ಶಾಕ್; ಬಸ್ ಟಿಕೆಟ್ ದರ ಹೆಚ್ಚಳ

• ಉದಯವಾಹಿನಿ, ಬೆಂಗಳೂರು

ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಕಂಗೆಟ್ಟಿರುವ ರಾಜ್ಯದ ಜನತೆಗೆ ಶೀಘ್ರವೇ ಮತ್ತೊಂದು ಶಾಕ್‌ಕಾದಿದ್ದು, ಶೀಘ್ರವೇ ಸರ್ಕಾರಿ ಬಸ್‌ಗಳ ಟಿಕೆಟ್ ದರದ ಪರಿಷ್ಕರಣೆಗೆ ಸರ್ಕಾರ ಮುಂದಾಗಿದೆ. ಈ ಬಗ್ಗೆ ಸ್ವತಃ ಮಾಹಿತಿ ನೀಡಿರುವ ಸಾರಿಗೆ ಸಚಿವ ಭೈರತಿ ಸುರೇಶ್, ಕಳೆದ ಎಂಟು ತಿಂಗಳಲ್ಲಿ ಕೇಂದ್ರ ಸರ್ಕಾರ ತೈಲೋತ್ಪನ್ನಗಳ ದರಗಳನ್ನು ಹೆಚ್ಚಳ ಮಾಡಿದೆ. ಹೀಗಿದ್ದರೂ ನಾವು ಬಸ್ ಪ್ರಯಾಣ ದರವನ್ನು ಹೆಚ್ಚಳ ಮಾಡಿಲ್ಲ. ಇದರಿಂದ ನಮ್ಮ ನಾಲ್ಕೂ ಸಾರಿಗೆ ನಿಗಮಗಳಿಗೆ ಸಾವಿರಾರು ಕೋಟಿ ರೂಪಾಯಿ ನಷ್ಟವಾಗುತ್ತಿದೆ. ಹೀಗಾಗಿ ನಿವೃತ್ತ ಹಿರಿಯ ಐಎಎಸ್ ಅಧಿಕಾರಿ ಅತುಲ್ ತಿವಾರಿ ನೇತೃತ್ವದ ಸಮಿತಿ ದರ ಪರಿಷ್ಕರಣೆ ಸಂಬಂಧಿಸಿದಂತೆ ಅಧ್ಯಯನ ನಡೆಸುತ್ತಿದ್ದು, ಸದ್ಯದಲ್ಲೇ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಿದೆ. ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಜನಸಾಮಾನ್ಯರಿಗೆ ಹೆಚ್ಚು ಹೊರೆಯಾಗದ ರೀತಿಯಲ್ಲಿ ಸ್ವಲ್ಪ ಪ್ರಮಾಣದಲ್ಲಿ ದರ ಪರಿಷ್ಕರಣೆ ಮಾಡಲಾಗುತ್ತದೆ ಎಂದವರು ತಿಳಿಸಿದ್ದಾರೆ. ಸಾಮಾನ್ಯ ಸರ್ಕಾರಿ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಕಲ್ಪಿಸುವ ಸರ್ಕಾರದ ಮಹತ್ವಾಕಾಂಕ್ಷೆಯ ಶಕ್ತಿ ಯೋಜನೆಯಡಿಯಲ್ಲಿ ರಾಜ್ಯದ ಒಂದು ಕೋಟಿಗೂ ಅಧಿಕ ಮಹಿಳೆಯರಿಗೆ ಮೊದಲ ಹಂತದಲ್ಲಿ ಉಚಿತ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸಲಾಗುತ್ತದೆ.50 ಕೋಟಿ ರೂಪಾಯಿಗಳ ವೆಚ್ಚವಾಗಲಿದ್ದು, ಸದ್ಯದಲ್ಲೇ ಈ ಪ್ರಕ್ರಿಯೆಗೆ ಚಾಲನೆ ನೀಡಲಾಗುತ್ತದೆ ಎಂದೂ ಸಚಿವರು ತಿಳಿಸಿದ್ದಾರೆ.

# 4,828 ಕೆರೆಯ 11,671 ಎಕರೆ ತೆರವಿಗೆ ಶೀಘ್ರ ಕ್ರಮ; ಕೆರೆ ಒತ್ತುವರಿ ಮಾಡಿದರೆ ಕ್ರಿಮಿನಲ್ ಕೇಸ್ ದಾಖಲು: ಸಚಿವ ಈಶ್ವರ ಖಂಡ್ರೆ

## ಇಡೀ ಭೂಮಿಯ ಸುತ್ತ ನೀರಿದೆ. ಆದರೆ ಕುಡಿಯುವ ನೀರು ಇರುವುದು ಶೇ.3ರಷ್ಟು ಮಾತ್ರ. ಹೀಗಾಗಿ ಜಲಮೂಲಗಳನ್ನು ರಕ್ಷಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ

• ಉದಯವಾಹಿನಿ, ಬೆಂಗಳೂರು

ಗ್ರಾಮ ಪಂಚಾಯಿತಿಗೆ ಸೇರಿದ ಮತ್ತು ನಿರ್ವಹಿಸುತ್ತಿರುವ ಯಾವುದೇ ಕೆರೆಯನ್ನು ಒತ್ತುವರಿ ಮಾಡಿದ್ದರೆ ನಿರ್ದಾಕ್ಷಿಣ್ಯವಾಗಿ ತೆರವು ಮಾಡಿಸಲಾಗುವುದು ಮತ್ತು ಒತ್ತುವರಿದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಎಚ್ಚರಿಕೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ದೇಶದಲ್ಲೇ 2ನೇ ಅತಿ ಹೆಚ್ಚು ಬರಡು ಭೂಮಿ ಇರುವ ರಾಜ್ಯವಾಗಿದ್ದು, ಗ್ರಾಮೀಣ ಕುಡಿಯುವ ನೀರು ಪೂರೈಕೆ ದೊಡ್ಡ ಸವಾಲಾಗಿದೆ. ಅಂತರ್ಜಲ ದಿನದಿಂದ ದಿನಕ್ಕೆ ಕುಸಿಯುತ್ತಿದ್ದು, ಮೇಲ್ಮೈ ಜಲ ಮೂಲಗಳನ್ನು ರಕ್ಷಿಸದಿದ್ದರೆ ಮುಂದೆ ನೀರಿಗೆ ಹಾಹಾಕಾರ ಎದುರಾಗಲಿದೆ ಎಂದರು. ಜಲಶಕ್ತಿ ಸಚಿವಾಲಯ ದೆಹಲಿಯಲ್ಲಿ ಆಯೋಜಿಸಿದ್ದ 2 ದಿನಗಳ ಸುಸ್ಥಿರ ಜಲ ಕುರಿತ ಇಲಾಖಾ ಶೃಂಗಸಭೆಯಲ್ಲಿ ನಾನು ಭಾಗಿಯಾಗಿ, ಪ್ರಧಾನಿಯವರ ಸಮ್ಮುಖದಲ್ಲಿ ರಾಜ್ಯ ಸರ್ಕಾರ, ಜಲ ಸಂರಕ್ಷಣೆಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ಪ್ರಾತ್ಯಕ್ಷಿಕೆ ಪ್ರಸ್ತುತ ಪಡಿಸಿದ್ದೇವೆ. ರಾಜ್ಯದ ಬಹುತೇಕ ಕಡೆ ಭೂಮಿಯೊಳಗೆ ಹೆಬ್ಬಂಡೆಗಳು ಮತ್ತು ಲ್ಯಾಟರೈಟ್ ಇರುವ ಕಾರಣ ಮಳೆಯ ನೀರು ಇಂಗದೇ ಅಂತರ್ಜಲ ಕುಸಿಯುತ್ತಿದೆ.

ಅತಿಯಾದ ಅಂತರ್ಜಲ ಬಳಕೆಯಿಂದಲೂ ಭೂಮಿಯೊಳಗಿನ ಜಲ ಮಟ್ಟ ಕುಸಿದಿದೆ.



ಹೀಗಾಗಿ ಮುಂದಿನ ದಿನಗಳಲ್ಲಿ ಮೇಲ್ಮೈ ಜಲ ಮೂಲಗಳೇ ಜೀವನಾಧಾರವಾಗಿದ್ದು, ನಾವು ಕೆರೆ, ಕಟ್ಟೆ, ಸರೋವರ, ನದಿಗಳನ್ನು ಸಂರಕ್ಷಿಸದಿದ್ದರೆ ಜಲಕ್ಷಾಮವೇ ಎದುರಾಗುತ್ತದೆ

### ಜಲ ಬಜೆಂಟಿಂಗ್ ಮಾಡಿದ ಪ್ರಥಮ ರಾಜ್ಯ ಕರ್ನಾಟಕ

ಇಡೀ ದೇಶದಲ್ಲಿ ವಾಟರ್ ಬಜೆಟಿಂಗ್ ಮಾಡಿದ ಪ್ರಥಮ ರಾಜ್ಯ ಕರ್ನಾಟಕವಾಗಿದೆ. ಇದರಿಂದ ನಿರ್ದಿಷ್ಟ ಭೌಗೋಳಿಕ ಪ್ರದೇಶದಲ್ಲಿ ಲಭ್ಯವಿರುವ ನೀರಿನ ಪ್ರಮಾಣ ಮತ್ತು ಆ ಪ್ರದೇಶದ ನೀರಿನ ಹಾಲಿ ಬೇಡಿಕೆ, ಭವಿಷ್ಯದ ಬೇಡಿಕೆ ಲೆಕ್ಕಹಾಕಿ ಸಮತೋಲಿತವಾಗಿ ನೀರು ಪೂರೈಕೆಗೆ ವೈಜ್ಞಾನಿಕ ಹಾಗೂ ವ್ಯವಸ್ಥಿತ ಯೋಜನೆ ರೂಪಿಸಲು ಸಹಕಾರಿಯಾಗಿದೆ ಎಂದರು. ರಾಜ್ಯದ 268 ಹಳ್ಳಿಗಳಲ್ಲಿ ನಿರಂತರ ಕುಡಿಯುವ ನೀರು ಪೂರೈಕೆ ಯೋಜನೆ ಜಾರಿಗೆ ತಂದಿದ್ದು, ಇದರಿಂದಾಗಿ ಶೇ.7ರಷ್ಟು ಕುಡಿಯುವ ನೀರಿನ ಹಾಗೂ ಶೇ.12 ರಷು ನೀರು ಪಂಪ್ ಮಾಡುವ ವಿದ್ಯುತ್ ಅವಧಿಯ ಉಳಿತಾಯವಾಗಿದೆ. ಜಿಲ್ಲಾ ನೀರು ಮತ್ತು ನೈರ್ಮಲ್ಯ ಅಭಿಯಾನದಡಿ ಡಿಸ್ಟ್ರಿಕ್ಟ್ ಫೆಡರಲ್ ಕೌಂಟ್ ಮಾಡಿ ಜಿಲ್ಲೆ, ರಾಜ್ಯಮಟ್ಟದಲ್ಲಿ ಸಮಿತಿ ರಚಿಸಿದ್ದೇವೆ. ಇದು ರಾಜ್ಯದಲ್ಲಿ ಶಾಶ್ವತ ಕುಡಿಯುವ ನೀರು ಪೂರೈಕೆಗೆ ಕ್ರಮ ಕೈಗೊಂಡಿದ್ದೇವೆ ಎಂಬ ವಿಷಯವನ್ನೂ ನಾನು ಶೃಂಗಸಭೆಯಲ್ಲಿ ತಿಳಿಸಿದ್ದೇನೆ ಎಂದು ಸಚಿವರು ತಿಳಿಸಿದರು.

ಎಂದು ತಿಳಿಸಿದರು. ಇಡೀ ಭೂಮಿಯ ಸುತ್ತ ನೀರಿದೆ. ಆದರೆ ಕುಡಿಯುವ ನೀರು ಇರುವುದು ಶೇ.3ರಷ್ಟು ಮಾತ್ರ. ಹೀಗಾಗಿ ಜಲಮೂಲಗಳನ್ನು ರಕ್ಷಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ.

ಅದಕ್ಕಾಗಿಯೇ ನಾನು ಶೃಂಗ ಸಭೆಯ ಸಮಾರೋಪ ಸಮಾರಂಭದಲ್ಲಿ ಪ್ರಧಾನಿಯವರ ಸಮ್ಮುಖದಲ್ಲೇ ಕೆರೆ, ಸರೋವರ, ನದಿಗಳ ನೀರು ತ್ಯಾಜ್ಯ ಸೇರ್ಪಡೆಯಿಂದ ಕಲುಷಿತಗೊಳ್ಳದಂತೆ ಹಾಗೂ ಒತ್ತುವರಿಯಾಗದಂತೆ ಸಂರಕ್ಷಿಸಲು ರಾಷ್ಟ್ರೀಯ ಯೋಜನೆ ರೂಪಿಸಲು ಒತ್ತಾಯಿಸಿದ್ದೇನೆ ಎಂದರು.

ರಾಜ್ಯದ 26,589 ಹಳ್ಳಿಗಳಲ್ಲಿ 4 ಕೋಟಿ 45 ಲಕ್ಷ ಜನರು ವಾಸಿಸುತ್ತಿದ್ದಾರೆ.

**ಜಲಮೂಲಗಳನ್ನು ರಕ್ಷಿಸುವ ಜವಾಬ್ದಾರಿ**

ಅಂದರೆ ರಾಜ್ಯದ ಒಟ್ಟು ಜನಸಂಖ್ಯೆಯ ಅರ್ಧಕ್ಕಿಂತ ಹೆಚ್ಚು ಜನರು ಹಳ್ಳಿಗಳಲ್ಲಿದ್ದಾರೆ. ಇವರೆಲ್ಲರಿಗೂ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವುದು ದೊಡ್ಡ ಸವಾಲಾಗಿದ್ದು, ಸರ್ಕಾರ ಮುಂದಿನ 30 ವರ್ಷಗಳಲ್ಲಿ ಹೆಚ್ಚಳವಾಗುವ ಜನಸಂಖ್ಯೆಯನ್ನೂ ಗಮನದಲ್ಲಿಟ್ಟುಕೊಂಡು ಏಕಗ್ರಾಮ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಅನುಷ್ಠಾನಗೊಳಿಸುತ್ತಿದೆ.

ಮೇಲ್ಮೈ ಜಲದ ಗುಣಮಟ್ಟ ಪರೀಕ್ಷೆಗೆ 1.51 ಲಕ್ಷ ಮಹಿಳೆಯರಿಗೆ ತರಬೇತಿ ನೀಡಿದ್ದು ಅವರಿಗೆ ಕ್ಷೇತ್ರೀಯ ಪರೀಕ್ಷಾ ಕಿಟ್ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 15,666/Gram 24ct ₹ 14,360 /Gram 22ct ಬೆಳ್ಳಿ: ₹250.00/

